ಇ) ಹಾಗಿದ್ದಲ್ಲಿ ಹೊಸದುರ್ಗ ತಾಲ್ಲೂಕಿಗೆ ರತ್ನಗಿರಿ ಅಲ್ಪಾನ್ನೊ ತಳಿಗಳನ್ನು ತರಿಸಲು ಮನವಿ ಸಲ್ಲಿಸಿ ಹಾಗೂ ಇದುವರೆಗೂ ಪುರಸ್ಕರಿಸದಿರಲು ಕಾರಣಗಳೇನು?

ಶ್ರೀ ಎನ್. ಹುಚ್ಚಮಾಸ್ತಿಗೌಡ (ಕೃಷಿ ಸಚಿವರು) :

ಅ) ಹೌದು

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ನಂಜನಗೂಡಿನಲ್ಲಿ ದಳವಾಯಿ ಕಟ್ಟಡ ಹೊಸದಾಗಿ ಕಟ್ಟುವುದು

37 - ಶ್ರೀ ಎಂ. ಮಹದೇವ್ (ನಂಜನಗೂಡು) : ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ನಂಜನಗೂಡು ಟೌನ್‌ನಲ್ಲಿರುವ ದಳವಾಯಿ ಕಟ್ಟಡವನ್ನು ಕೆಡವಿ ಹೊಸ ಕಟ್ಟಡ ಕಟ್ಟಲು ಸರ್ಕಾರ 5-6 ವರ್ಷಗಳಿಂದ ಕ್ರಮ ತೆಗೆದುಕೊಳ್ಳದಿರುವುದರಿಂದ ಅಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ದಳವಾಯಿ ಕಟ್ಟಡ ಕಟ್ಟಲು ಯಾವಾಗ ಪ್ರಾರಂಭ ಮಾಡಲಾಗುವುದು ಮತ್ತು ಕಟ್ಟಡದ ಅಂದಾಜು ವೆಚ್ಚ ಎಷ್ಟು? ಹಾಗೂ ಬಿಡುಗಡೆ ಮಾಡಿರುವ ಹಣವೆಷ್ಟು?

ಇ) ಕಟ್ಟಡ ಕೆಡವುದಕ್ಕೆ ಮುಂಚೆ ಇದ್ದ ಸುಮಾರು ರೂ. 10.00 ಲಕ್ಷಗಳ ಮೌಲ್ಯದ ಮರವಟ್ಟುಗಳು ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದಲ್ಲಿ ತನಿಖೆ ಮಾಡಿ ತಪಿತಸ್ಥರ ಮೇಲೆ ಕ್ರಮತೆಗೆದುಕೊಳ್ಳಲಾಗುವುದೆ?

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯ ಮಂತ್ರಿಗಳು) :

ಅ) ಹಳೆಯ ಕಟ್ಟಡವನ್ನು ಕೆಡವಿದೆ. ಶಾಲೆಯನ್ನು ನಡೆಸಲು ಬೇರೆ ಕಡೆ ಸ್ಥಳವನ್ನು ಒದಗಿಸಿದೆ.

ಆ) ಹೊಸ ಶಾಲಾ ಕಟ್ಟಡ ನಿರ್ಮಾಣಕ್ಕೆ ರೂ. 46.00 ಲಕ್ಷಗಳ ಅಂದಾಜು ಪಟ್ಟಿ ತಯಾರಿಸಿದೆ. ಮುಂದಿನ ಹಣಕಾಸು ವರ್ಷದಲ್ಲಿ ಅನುದಾನ ಒದಗಿಸಲು ಪ್ರಯತ್ನ ಮಾಡಲಾಗುವುದು.

ಇ) ಇಲ್ಲ

ಈ) ಪ್ರಶ್ನೆ (ಇ)ಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಸರ್ಕಾರಿ ನೌಕರರ ಪ್ರಯಾಣಭತ್ಯೆ ಹಾಗೂ ದಿನಭತ್ಯೆ.

936 - ಶ್ರೀ ಕೆ. ಸಿದ್ದಯ್ಯ (ಸಂತೆಮಾರನ ಹಳ್ಳಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸರ್ಕಾರಿ ನೌಕರನ ಕುಟುಂಬದ ಐದು ಜನ ಸದಸ್ಯರಿಗೆ ಅವರು ವರ್ಗಾವಣೆಯಾದ ಸ್ಥಳಕ್ಕೆ ಪ್ರಯಾಣ ಮಾಡದಿದ್ದಾಗ್ಯೂ ಸಹ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ಕೊಡುವುದು ನಿಜವೆ?